ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20.09.2019ರ "ಮುಖ್ಯಮಂತ್ರಿಗಳ ನವ ನಗರೋತ್ಥಾನ ಯೋಜನೆ"ಯ ಅಡಿಯಲ್ಲಿ ಅನುಮೋದನೆ ನೀಡಿರುವ ರೂ.2.00 ಕೋಟಿಗಳಿಗಿಂತ ಕಡಿಮೆ ಮೊತ್ತದ ಮತ್ತು ತುರ್ತು ಕಾಮಗಾರಿಗಳೆಂದು ಬಿ.ಬಿ.ಎಂ.ಪಿ.ಯಿಂದ ನಿಯಮಾನುಸಾರ ನಿರ್ಧರಿಸಿ ಮೆ॥ ಕೆ.ಆರ್.ಐ.ಡಿ.ಎಲ್. ಸಂಸ್ಥೆಗೆ ವಹಿಸುವ ಕಾಮಗಾರಿಗಳಿಗೆ ಸೀಮಿತವಾಗಿ ಕಾಮಗಾರಿಗಳ ಅಂದಾಜುಪಟ್ಟಿಗಳಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡುವ ಸರ್ಕಾರದ ಅಧಿಕಾರವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಿಗೆ ಪ್ರತ್ಯಾಯೋಜಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20.09.2019.
2. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇವರ ಪತ್ರ ಸಂಖ್ಯೆ: ಬಿ.ಬಿ.ಎಂ.ಪಿ./ಪಿಆರ್/3486/2019-20, ದಿನಾಂಕ: 11.10.2019.

* * * * *

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ದಿನಾಂಕ: 20.09.2019ರ ಆದೇಶದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 2018-19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವ ಅನುದಾನದಲ್ಲಿ ಕೈಗೊಳ್ಳಲು ಉದ್ದೇಶಿಸಿ ಸರ್ಕಾರದ ಆದೇಶ ಸಂಖ್ಯೆ: ಬೆಂಗಳೂರು ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 01.02.2019 ರಂತೆ ಅನುಮೋದಿಸಿದ್ದ "ಮುಖ್ಯಮಂತ್ರಿಗಳ ನವ ಬೆಂಗಳೂರು ಯೋಜನೆಯನ್ನು ರದ್ದುಪಡಿಸಿ ಪರ್ಯಾಯವಾಗಿ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಯೋಜನೆಯ ಅಡಿಯಲ್ಲಿ ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆಯನ್ನು ನೀಡಲಾಗಿರುತ್ತದೆ. ಸದರಿ ಆದೇಶದಲ್ಲಿ ತುರ್ತು ಸಂದರ್ಭಗಳಲ್ಲಿ ಕಾಮಗಾರಿಗಳನ್ನು ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ: ಆಇ 344 ವೆಚ್ಚ-12/2018 ರಂತೆ ನಿರ್ವಹಿಸಲು ಅನುಮೋದನೆ ನೀಡಲಾಗಿರುತ್ತದೆ.

2. ಮೇಲೆ (2) ರಲ್ಲಿ ಓದಲಾದ ದಿನಾಂಕ: 11.10.2019ರ ಪತ್ರದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 2018-19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿ ಒದಗಿಸಿರುವ ಅನುದಾನದಲ್ಲಿ ಕೈಗೊಳ್ಳಲು ಉದ್ದೇಶಿಸಿ, ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 01.02.2019 ರಂತೆ ಅನುಮೋದಿಸಿದ್ದ "ಮುಖ್ಯಮಂತ್ರಿಗಳ ನವ ಬೆಂಗಳೂರು" ಯೋಜನೆಯನ್ನು ರದ್ದುಪಡಿಸಿ, ಪರ್ಯಾಯವಾಗಿ ಮುಖ್ಯಮಂತ್ರಿಗಳ ನವ ನಗರೋತ್ಥಾನ ಕ್ರಿಯಾ ಯೋಜನೆಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20.09.2019 ರಲ್ಲಿ ಸರ್ಕಾರವು ಅನುಮೋದನೆ ನೀಡಿರುತ್ತದೆ. ಈ ಕ್ರಿಯಾಯೋಜನೆಯಲ್ಲಿ ಕೆ.ಆರ್.ಪುರ ವಿಭಾಗಕ್ಕೆ ಸಂಬಂಧಿಸಿದಂತೆ ಅನುಬಂಧ-2, 6 ಮತ್ತು 7 ರಂತೆ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಅನುಮೋದನೆ

---2

ದೊರತಿದ್ದು, ಜಾಬ್ ಸಂಖ್ಯೆಯನ್ನು ಪಡೆಯಲಾಗಿರುತ್ತದೆ. ಪ್ರಸ್ತಾವನೆಯಲ್ಲಿನ ಕಾಮಗಾರಿಗಳನ್ನು ತುರ್ತಾಗಿ ಕೈಗೆತ್ತಿಕೊಳ್ಳಬೇಕಾಗಿರುವುದರಿಂದ ಪ್ರಸ್ತಾಪಿತ ಕಾಮಗಾರಿಗಳು ರೂ.2.00 ಕೋಟಿ ಮೊತ್ತದ ಮಿತಿಯೊಳಗೆ ಇರುವುದರಿಂದ ಸದರಿ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಕಾಮಗಾರಿಗಳನ್ನು ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ: ಆಇ 344 ವೆಚ್ಚ/2018 ರಂತೆ, ಮೆ॥ ಕೆ.ಆರ್.ಐ.ಡಿ.ಎಲ್ ಸಂಸ್ಥೆಗೆ ವಹಿಸಲು ಸರ್ಕಾರದ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

3. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಶವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ನಆಇ 250 ಎಂಎನ್‌ಪೈ 2019, ಬೆಂಗಳೂರು, ದಿನಾಂಕ: 15.10.2019.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ನಆಇ 375 ಎಂಎನ್‌ಪೈ 2018, ದಿನಾಂಕ: 20.09.2019 ರಲ್ಲಿ ತುರ್ತು ಸಂದರ್ಭಗಳಲ್ಲಿ ಕಾಮಗಾರಿಗಳನ್ನು ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ:ಆಇ 344 ವೆಚ್ಚ-12/2018ರಂತೆ ಕ್ರಮ ವಹಿಸಲು ಅನುಮೋದನೆ ನೀಡಲಾಗಿದ್ದು, ಅವು ತುರ್ತು ಕಾಮಗಾರಿಗಳೇ, ಅಲ್ಲವೇ ಎಂದು ನಿಯಮಾನುಸಾರ ನಿರ್ಧರಿಸುವುದು ಬಿ.ಬಿ.ಎಂ.ಪಿಯ ಆಯುಕ್ತರ ವಿವೇಚನೆಗೆ ಒಳಪಟ್ಟಿದೆ. ಸರ್ಕಾರದ ಆದೇಶ ಸಂಖ್ಯೆ: ನಆಇ 375 ಎಂಎನ್‌ಪೈ 2018, ದಿನಾಂಕ: 20.09.2019 ರಲ್ಲಿ ಅನುಮೋದಿಸಲಾಗಿರುವ ರೂ.2.00 ಕೋಟಿಗಳಿಗಿಂತ ಕಡಿಮೆ ಮೊತ್ತದ ಮತ್ತು ತುರ್ತು ಕಾಮಗಾರಿಗಳೆಂದು ಬಿ.ಬಿ.ಎಂ.ಪಿ.ಯಿಂದ ನಿಯಮಾನುಸಾರ ನಿರ್ಧರಿಸಿ ಮೆ॥ ಕೆ.ಆರ್.ಐ.ಡಿ.ಎಲ್ ಸಂಸ್ಥೆಗೆ ವಹಿಸುವ ಕಾಮಗಾರಿಗಳಿಗೆ ಸೀಮಿತವಾಗಿ ಕಾಮಗಾರಿಗಳ ಅಂದಾಜು ಪಟ್ಟಿಗಳಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡುವ ಸರ್ಕಾರದ ಅಧಿಕಾರವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಿಗೆ ಪ್ರತ್ಯಾಯೋಜಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
(ಲಕ್ಷ್ಮೀಸಾಗರ ಆರ್.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ).

ಇವರಿಗೆ:

1. ಮಹಾಲೇಖಪಾಲರು (A&E)/(G&SSA)/(E&RSA), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
7. ಜಂಟಿ ನಿರ್ದೇಶಕರು (ಯೋಜನೆ), ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು/ಕಂಪೆಂಡಿಯಂ/ಇಲಾಖಾ ವೆಬ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಟಿಪ್ಪಣಿ ಹಾಳೆ

ವಿಷಯ.....

..... ಪುಟದ ಸಂಖ್ಯೆ .....

..... ಕಡತದ ಸಂಖ್ಯೆ .....

— 01 —

ಪಂಕ್ತಿಯ ಸಂಖ್ಯೆ	ಟಿಪ್ಪಣಿಗಳು ಮತ್ತು ಆಜ್ಞೆಗಳು

ಮಂಡಿಸಿದೆ.

ವಿಷಯ:- Improvements to roads and drains at Valmiki maharshi road A D colony Munithimmayya layout cross roads and surrounding areas in ward no -01 of yelahanka Sub division.

ಉಲ್ಲೇಖ:-

1. ಸರ್ಕಾರದ ಆದೇಶ ಸಂಖ್ಯೆ : ನಅಇ 648 ಎಂ.ಎನ್.ವೈ 2018 ಬೆಂಗಳೂರು ದಿನಾಂಕ: 31-05-2019.
2. ಸರ್ಕಾರದ ಆದೇಶ ಸಂಖ್ಯೆ : ನಅಇ 375 ಎಂ.ಎನ್.ವೈ 2018 ಬೆಂಗಳೂರು ದಿನಾಂಕ: 20-9-2019.
3. ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ: ಆಯುಕ್ತರು/ಪಿ.ಆರ್/ 3159/ 2019-20 ದಿನಾಂಕ: 25-09-2019.
4. ಸರ್ಕಾರದ ಆದೇಶ ಸಂಖ್ಯೆ : ನಅಇ 250 ಎಂ.ಎನ್.ವೈ 2019 ಬೆಂಗಳೂರು ದಿನಾಂಕ: 15-10-2019.
5. ಬಿ.ಬಿ.ಎಂ.ಪಿ ಸದಸ್ಯರು ಕೆಂಪೇಗೌಡ ವಾರ್ಡ್ ನಂ-01 ರವರ ಮನವಿ ಪತ್ರದ ದಿನಾಂಕ: 18-10-2019.

★ ★ ★ ★ ★

ಮೇಲ್ಕಂಡ ವಿಷಯಕ್ಕೆ ಸಂಬಂದಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಪ್ರದೇಶಗಳಲ್ಲಿ ಮೂಲಭೂತ ಸೌಕಾರ್ಯಗಳ ಅಭಿವೃದ್ಧಿಗಾಗಿ ಮಾನ್ಯ ಮುಖ್ಯ ಮಂತ್ರಿಗಳ ನವ ನಗರೋತ್ಥಾನ ಯೋಜನೆಯಡಿಯಲ್ಲಿ ರೂ. 8015.37 ಕೋಟಿಗಳ ಅನುದಾನ ಮೀಸಲಿಟ್ಟಿದ್ದು, ಸರ್ಕಾರದ ಆದೇಶ ಸಂಖ್ಯೆ : ನಅಇ 375 ಎಂ.ಎನ್.ವೈ 2018 ಬೆಂಗಳೂರು ದಿನಾಂಕ: 20-09-2019. ರಲ್ಲಿ ಯಲಹಂಕ ವಿಧಾನಸಭಾ ಕ್ಷೇತ್ರಕ್ಕೆ ಒಳಪಡುವ ಕೆಂಪೇಗೌಡ ವಾರ್ಡ್ ನಂ-01ರಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗದವರು ವಾಸ ಮಾಡುವ ಪ್ರದೇಶಗಳಲ್ಲಿರುವ ರಸ್ತೆ ಚರಂಡಿ ಹಾಗೂ ಕುಡಿಯುವ ನೀರಿನ ಸೌಲಭ್ಯಗಳನ್ನು ಒದಗಿಸಿ ಸಾರ್ವಜನಿಕರಿಗೆ ಅನುಕೂಲಮಾಡಲು ಈ ಮೇಲ್ಕಂಡ ಕಾಮಗಾರಿಗೆ ಉಲ್ಲೇಖ ಪತ್ರ(2)ರ ಅನುಬಂಧ-2ರಲ್ಲಿ ರೂ.95.00 ಲಕ್ಷಗಳನ್ನು ಮಿಸಲಿಟ್ಟಿದ್ದು, ಸದರಿ ಕಾಮಗಾರಿಗೆ ಈಗಾಗಲೇ ಉಲ್ಲೇಖ ಪತ್ರ (1)ರಂತೆ ಕಾಮಗಾರಿ ಸಂಕೇತ ದೊರೆತಿದ್ದು, ಇದನ್ನು ಉಲ್ಲೇಖ ಪತ್ರ (3)ರಲ್ಲಿ ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶದಂತೆ ಸರ್ಕಾರದ ಆದೇಶ ಸಂಖ್ಯೆ ನಅಇ 648 ಎಂ.ಎನ್.ವೈ 2018, ದಿನಾಂಕ: 31-05-2019 ರಂತೆ ಅನುಮೋದಿಸಲಾಗಿರುವ ರೂ. 577.57 ಕೋಟಿಗಳ ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ ಕ್ರಿಯಾಯೋಜನೆಯಲ್ಲಿ ಸೇರಿರುವ ಎಲ್ಲಾ ಕಾಮಗಾರಿಗಳನ್ನು ಮತ್ತು ಕಾಮಗಾರಿಗಳ ಮೊತ್ತಗಳನ್ನು ಮೂಲ ಆದೇಶದಂತೆಯೇ ಉಳಿಸಿಕೊಂಡು ನೂತನ ಕ್ರಿಯಾಯೋಜನೆಯಲ್ಲಿ ಆಳವಡಿಸಿದ್ದು, ಎಸ್.ಸಿ.ಎಸ್.ಪಿ

ಪು.ತಿ.ನೋ

ಪಂಕ್ತಿಯ ಸಂಖ್ಯೆ	ಟಿಪ್ಪಣಿಗಳು ಮತ್ತು ಆಜ್ಞೆಗಳು
(3)	ಮತ್ತು ಟಿ.ಎಸ್.ಪಿ ಕಾಯ್ದೆಯಡಿ ಈ ಯೋಜನೆಗಳನ್ನು ನಿಗಧಿತ ಕಾಲದಲ್ಲಿ ಅನುಷ್ಠಾನಗೊಳಿಸಬೇಕಿದ್ದು. ಈಗಾಗಲೇ ಸಾಕಷ್ಟು ಕಾಲವಿಳಂಭವಾಗಿರುವುದರಿಂದ ಮತ್ತು ಎಸ್.ಸಿ/ಎಸ್.ಟಿ ಜನಾಂಗದವರು ವಾಸಿಸುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ತುರ್ತಾಗಿ ಅನುಷ್ಠಾನಗೊಳಿಸಲು ಈಗಾಗಲೇ ಜಾಬ್ ಸಂಖ್ಯೆ ನಿಡಿರುವುದರಿಂದ ಮತ್ತೊಮ್ಮೆ ಜಾಬ್ ಸಂಖ್ಯೆ ನಿಡುವುದು ಅನಾವಶ್ಯಕವಾಗಿ ಕಾಲವಿಳಂಭವಾಗುವುದನ್ನು ತಡೆಗಟ್ಟುವ ಸಲುವಾಗಿ ಸದರಿ ಜಾಬ್ ಸಂಖ್ಯೆಯ ಪ್ರಮಾಣ ಪತ್ರಗಳನ್ನು "ಮಾನ್ಯ ಮುಖ್ಯ ಮಂತ್ರಿಗಳ ನವಬೆಂಗಳೂರು ಯೋಜನೆಯ" ಬದಲಾಗಿ "ಮಾನ್ಯ ಮುಖ್ಯ ಮಂತ್ರಿಗಳ ನವನಗರೋತ್ಥಾನ ಯೋಜನೆ" ಎಂದು ಓದಿಕೊಳ್ಳಲು ಹಾಗೂ ಕಾಮಗಾರಿಗಳನ್ನು ನಿಯಮಾನುಸಾರ ಕೂಡಲೇ ಅನುಷ್ಠಾನಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿರುತ್ತಾರೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗದವರು ವಾಸ ಮಾಡುವ ಸ್ಥಳಗಳನ್ನು ಅಭಿವೃದ್ಧಿ ಪಡಿಸುವ ಸಲುವಾಗಿ ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶದಂತೆ ಶೇಕಡ 50% ಕ್ಕಿಂತ ಹೆಚ್ಚಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗದವರು ವಾಸ ಮಾಡುವುದರ ಬಗ್ಗೆ ಸಂಬಂದಿಸಿದ ಸಹಾಯಕ ಕಂದಾಯ ಅಧಿಕಾರಿಗಳಿಂದ ದೃಡೀಕರಿಸಿಕೊಂಡು ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಆದೇಶಿಸಿರುತ್ತಾರೆ. ಅದರಂತೆ ದೃಡೀಕರಣ ಪತ್ರಗಳನ್ನು ಸಹಾಯಕ ಕಂದಾಯ ಅಧಿಕಾರಿಗಳು ಯಲಹಂಕ ಉಪ ವಿಬಾಗರವರಿಂದ ಪಡೆಯಲಾಗಿರುತ್ತದೆ. ಉಲ್ಲೇಖ ಪತ್ರ (4)ರ ಸರ್ಕಾರದ ಆದೇಶದ ಷರತ್ತುಗಳಲ್ಲಿರುವ ಕ್ರ.ಸಂ-04ರಲ್ಲಿ ತುರ್ತು ಸಂದರ್ಭಗಳಲ್ಲಿ ಕಾಮಗಾರಿಗಳನ್ನು ಆರ್ಥಿಕ ಇಲಾಖೆಯ ಅಧಿಸೂಚನೆಯ ಸಂಖ್ಯೆ ಆಇ : 344 ವೆಚ್ಚ-ಬ/2018 ರಂತೆ ವಹಿಸಲು ಅನುಮೋದನೆ ನೀಡಿರುತ್ತಾರೆ. ಹಾಗೂ ಸದರಿ ಆದೇಶದಂತೆ ಅನುಮೋದನೆಯಾಗಿರುವ ಕಾಮಗಾರಿಗಳಲ್ಲಿ ರೂ. 2.00 ಕೋಟಿಗಳು ಹಾಗೂ ಅದಕ್ಕಿಂದ ಕಡಿಮೆ ಮೊತ್ತದ ಮತ್ತು ತುರ್ತು ಕಾಮಗಾರಿಗಳೆಂದು ಬಿ.ಬಿ.ಎಂ.ಪಿ ಯಿಂದ ನಿಯಾಮಾನುಸಾರ ನಿರ್ದರಿಸಿ ಮೆ॥ ಕೆ.ಆರ್.ಐ.ಡಿ.ಎಲ್ ಸಂಸ್ಥೆಯ ಮೂಲಕ ಕೈಗೊಂಡು ನಿರ್ವಹಿಸಲು ಹಾಗೂ ಸದರಿ ಕಾಮಗಾರಿಗಳಿಗತೆ ಆಡಳಿತಾತ್ಮಕ ಅನುಮೋದನೆ ನೀಡಲು ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರಿಗೆ ಅಧಿಕಾರ ಪ್ರತ್ಯಾಯೋಜಿಸಿ ಆದೇಶಿಸಿರುತ್ತಾರೆ.
(4)	ಹಾಗೂ ಉಲ್ಲೇಖ ಪತ್ರ (5)ರಲ್ಲಿ ಬಿ.ಬಿ.ಎಂ.ಪಿ ಸದಸ್ಯರು ಕೆಂಪೇಗೌಡ ವಾರ್ಡ್ ನಂ-01 ರವರು ಪತ್ರ ನೀಡಿ, ವಾರ್ಡ್ ನಂ-01ರ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗದವರು ವಾಸಮಾಡುತ್ತಿದ್ದು. ಈ ಪ್ರದೇಶಗಳಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ಕಾವೇರಿ ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವ ಸಲುವಾಗಿ ರಸ್ತೆಗಳನ್ನು ಅಗೆದಿದ್ದು. ಮುಚ್ಚಿರುವುದಿಲ್ಲ. ಆದುದರಿಂದ ಸದರಿ ಪ್ರದಶಗಳನ್ನು ತುರ್ತಾಗಿ ಅಭಿವೃದ್ಧಿ ಪಡಿಸಿಕೊಡಲು ಕೋರಿರುತ್ತಾರೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಟಿಪ್ಪಣಿ ಹಾಳೆ

ವಿಷಯ .....

..... ಪುಟದ ಸಂಖ್ಯೆ .....

..... ಕಡತದ ಸಂಖ್ಯೆ .....

ಪಂಕ್ತಿಯ ಸಂಖ್ಯೆ	ಟಿಪ್ಪಣಿಗಳು ಮತ್ತು ಆಜ್ಞೆಗಳು

ಆದುದರಿಂದ ಕೆಂಪೇಗೌಡ ವಾರ್ಡ್ ನಂ-01 ವ್ಯಾಪ್ತಿಯಲ್ಲಿರುವ ವಾಲ್ಮೀಕಿ ಮಹರ್ಷಿ ರಸ್ತೆ, ಎ.ಡಿ.ಕಾಲೋನಿ ಮುನಿತಿಮ್ಮಯ್ಯ ಬಡಾವಣೆ ಅಡ್ಡರಸ್ತೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳನ್ನು ಅಭಿವೃದ್ಧಿ ಪಡಿಸಲು ಈ ಮೇಲ್ಕಂಡ ಕಾಮಗಾರಿಗೆ 2018-19ನೇ ಸಾಲಿನ ಲೆಕ್ಕಶೀರ್ಷಿಕೆ ಪಿ-3727 ರಡಿಯಲ್ಲಿ ರೂ. 95.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ಲೋಕೋಪಯೋಗಿ ಇಲಾಖೆ 2018-19ನೇ ಸಾಲಿನಲ್ಲಿ ಮಂಜೂರಾಗಿರುವ ದರಪಟ್ಟಿಯಂತೆ ತಯಾರಿಸಲಾಗಿದೆ. ಸದರಿ ಅಂದಾಜು ಪಟ್ಟಿಯಲ್ಲಿ ಈ ಕೆಳಕಂಡ ಅಂಶಗಳು ಒಳಗೊಂಡಿರುತ್ತದೆ.

1. ಆರ್.ಸಿ.ಸಿ ಚರಂಡಿ ನಿರ್ಮಾಣ ಮಾಡಲು ಮಣ್ಣು ಅಗೆತ ಕೆಲಸ ಮಾಡುವುದು
2. ತೆಗೆದ ಮಣ್ಣನ್ನು ದೂರದ ಸ್ಥಳಕ್ಕೆ ಸಾಗಿಸುವುದು
3. ಆರ್.ಸಿ.ಸಿ. ಚರಂಡಿಗಳ ತಳಭಾಗಕ್ಕೆ 1:4:8 ಮಿಶ್ರಣದ ಕಾಂಕ್ರೀಟ್ ಹಾಕುವುದು
4. ಆರ್.ಸಿ.ಸಿ. ಚರಂಡಿಗಳಿಗೆ ಉಕ್ಕಿನ ಸರಳುಗಳನ್ನು ಅಳವಡಿಸಿ ಎಂ-20 ಮಿಶ್ರಣದ ಕಾಂಕ್ರೀಟ್ ಹಾಕುವುದು
5. ಚರಂಡಿಗಳಿಗೆ ಆರ್.ಸಿ.ಸಿ. ಪ್ರೀ ಕ್ಯಾಸ್ಟ್ ಕವರಿಂಗ್ ಸ್ಲ್ಯಾಬ್‌ಗಳನ್ನು ಅಳವಡಿಸುವುದು.
6. ಕಿರಿದಾದ ರಸ್ತೆಗಳಿಗೆ ಕಾಂಕ್ರೀಟ್ ಹಾಕುವುದು

(5)

ಈ ಮೇಲ್ಕಂಡ ಎಲ್ಲಾ ಅಂಶಗಳು ಕಾಮಗಾರಿಗೆ ಬಹಳ ಅವಶ್ಯಕವಾಗಿದ್ದು, ಇವುಗಳನ್ನು ಅಳವಡಿಸಿಕೊಂಡು ಅಂದಾಜು ಪಟ್ಟಿಯನ್ನು ತಯಾರಿಸಲಾಗಿದೆ. ಸದರಿ ಕಾಮಗಾರಿಗೆ 2018-19ನೇ ಸಾಲಿನ "ಮಾನ್ಯ ಮುಖ್ಯ ಮಂತ್ರಿಗಳ ನವನಗರೋತ್ಥಾನ ಯೋಜನೆ" ಯಡಿಯಲ್ಲಿ ಜಾಬ್ ಸಂಕೇತ 001-20-000003 ರಂತೆ ದೊರೆತಿರುವುದರಿಂದ ಈ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜುರಾತಿ ಹಾಗೂ ಸದರಿ ಕಾಮಗಾರಿಯನ್ನು ತುರ್ತಾಗಿ ಮೆ11.ಕೆ.ಆರ್.ಐ.ಡಿ.ಎಲ್ ಸಂಸ್ಥೆ ವತಿಯಿಂದ ಕೈಗೊಂಡು ನಿರ್ವಹಿಸಲು ಕೋರಿ ಕಡತವನ್ನು ತಮ್ಮ ಮುಂದಿನ ಆದೇಶಕ್ಕಾಗಿ ಮಂಡಿಸಿದೆ.

(6)

ಸಹಾಯಕ ಅಭಿಯಂತರರು

Office of the Asst. Executive Engineer 03/10/19 BBMP Yelahanka, Bnglre

ಸಹಾಯಕ ಕಾರ್ಯಪಾಲಕ ಅಭಿಯಂತರರು 31/10/19

Asst. Executive Engineer
Yelahanka Sub Division
(BBMP Ynk Zn)
Yelananka, Bangalore

ಪು.ತಿ.ನೋ

06	1	Yelananka Burial development of kempegowda ward no -01 of yelahanka Sub division ground in	10.00	25000.00	ST	40065

ಪಂಕ್ತಿಯ ಸಂಖ್ಯೆ	ಟಿಪ್ಪಣಿಗಳು ಮತ್ತು ಆಜ್ಞೆಗಳು
7	ಕಾರ್ಯಪಾಲಕ ಅಭಿಯಂತರರು (ಯು.ಬಿ) ಕಂಡಿಕೆ (1)ರಿಂದ (6) ರವರೆಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಯಲಹಂಕ ಉಪ ವಿಭಾಗರವರು ವಿವರಿಸಿರುವಂತೆ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಮಾನ್ಯ ಮುಖ್ಯ ಮಂತ್ರಿಗಳ ನವ ನಗರೋತ್ಥಾನ ಯೋಜನೆಯಡಿಯಲ್ಲಿ ರೂ. 8015.37 ಕೋಟಿಗಳ ಅನುದಾನ ಮೀಸಲಿಟ್ಟಿದ್ದು, ಸರ್ಕಾರದ ಆದೇಶ ಸಂಖ್ಯೆ : ನ:ಅ.ಇ 375 ಎಂ.ಎನ್.ವೈ 2018 ಬೆಂಗಳೂರು ದಿನಾಂಕ: 20-09-2019. ರಲ್ಲಿ ಯಲಹಂಕ ವಿಧಾನಸಭಾ ಕ್ಷೇತ್ರಕ್ಕೆ ಒಳಪಡುವ ಕೆಂಪೇಗೌಡ ವಾರ್ಡ್ ನಂ-01ರಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗದವರು ವಾಸ ಮಾಡುವ ಪ್ರದೇಶಗಳಲ್ಲಿರುವ ರಸ್ತೆ ಚರಂಡಿ ಹಾಗೂ ಕುಡಿಯುವ ನೀರಿನ ಸೌಲಭ್ಯಗಳನ್ನು ಕಲ್ಪಿಸಲು ಅನುಬಂಧ-02ರಲ್ಲಿ ರೂ. 95.00 ಲಕ್ಷಗಳಿಗೆ 001-20-000003 ರಂತೆ ಜಾಬ್ ಸಂಕೇತ ದೊರೆತಿರುತ್ತದೆ.
8	ಉಲ್ಲೇಖ ಪತ್ರ (4)ರ ಸರ್ಕಾರದ ಆದೇಶದ ಷರತ್ತುಗಳಲ್ಲಿರುವ ಕ್ರ.ಸಂ-04ರಲ್ಲಿ ತುರ್ತು ಸಂದರ್ಭಗಳಲ್ಲಿ ಕಾಮಗಾರಿಗಳನ್ನು ಆರ್ಥಿಕ ಇಲಾಖೆಯ ಅಧಿಸೂಚನೆಯ ಸಂಖ್ಯೆ ಆಇ : 344 ವೆಚ್ಚ-2/2018 ರಂತೆ ವಹಿಸಲು ಅನುಮೋದನೆ ನೀಡಿರುತ್ತಾರೆ. ಹಾಗೂ ಸದರಿ ಆದೇಶದಂತೆ ಅನುಮೋದನೆಯಾಗಿರುವ ಕಾಮಗಾರಿಗಳಲ್ಲಿ ರೂ. 2.00 ಕೋಟಿಗಳು ಹಾಗೂ ಅದಕ್ಕಿಂದ ಕಡಿಮೆ ಮೊತ್ತದ ಮತ್ತು ತುರ್ತು ಕಾಮಗಾರಿಗಳೆಂದು ಬಿ.ಬಿ.ಎಂ.ಪಿ ಯಿಂದ ನಿಯಾಮಾನುಸಾರ ನಿರ್ದರಿಸಿ ಮೆ||ಕೆ.ಆರ್.ಐ.ಡಿ.ಎಲ್ ಸಂಸ್ಥೆಯ ಮೂಲಕ ಕೈಗೊಂಡು ನಿರ್ವಹಿಸಲು ಸೂಚಿಸಿರುವ ಮೆರೆಗೆ ಮೇಲ್ಕಂಡ ಕಾಮಗಾರಿಯನ್ನು ನಿರ್ವಹಿಸುವ ಪ್ರದೇಶಗಳಲ್ಲಿ ಬಿ.ಡಬ್ಲ್ಯ್ಯು.ಎಸ್.ಎಸ್.ಬಿ ಇಲಾಖೆಯವರು ಕಾವೇರಿ ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವ ಸಲುವಾಗಿ ರಸ್ತೆಗಳನ್ನು ಅಗೆದಿದ್ದು, ಮುಚ್ಚಿರುವುದಿಲ್ಲ. ಹಾಗೂ ಈ ವಿಚಾರವಾಗಿ ಬಿ.ಬಿ.ಎಂ.ಪಿ ಸದಸ್ಯರು ಹಾಗೂ ಸಾರ್ವಜನಿಕರು ಅನೇಕ ದೂರುಗಳು ಬಂದಿದ್ದು, ಸದರಿ ಕಾಮಗಾರಿಯನ್ನು ಅತಿ ತುರ್ತಾಗಿ ಕೈಗೊಂಡು ಅನುಷ್ಟಾನಗೊಳಿಸಬೇಕಾಗಿರುತ್ತದೆ. ಆದುದರಿಂದ ಈ ಕೆಳಕಂಡ ಅಂಶಗಳಿಗೆ ಅನುಮೋದನೆ ಕೋರಿ ಕಡತವನ್ನು ತಮ್ಮ ಮುಂದಿನ ಆದೇಶಕ್ಕಾಗಿ ಮಂಡಿಸಿದೆ. 1. ಈ ಮೇಲ್ಕಂಡ ಕಾಮಗಾರಿಯನ್ನು "ಮಾನ್ಯ ಮುಖ್ಯ ಮಂತ್ರಿಗಳ ನವ ಬೆಂಗಳೂರು ಯೋಜನೆ" ಬದಲಾಗಿ "ಮಾನ್ಯ ಮುಖ್ಯ ಮಂತ್ರಿಗಳ ನವ ನಗರೋತ್ಥಾನ ಯೋಜನೆ" ಎಂದು ಅನುಮೋದಿಸಲು ಕೋರಿ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಟಿಪ್ಪಣಿ ಹಾಳೆ

ವಿಷಯ.....

..... ಪುಟದ ಸಂಖ್ಯೆ .....

..... ಕಡತದ ಸಂಖ್ಯೆ .....

ಪಂಕ್ತಿಯ ಸಂಖ್ಯೆ	ಟಿಪ್ಪಣಿಗಳು ಮತ್ತು ಆಜ್ಞೆಗಳು

೨. ಸದರಿ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಲು ಕೋರಿ.

೩. ಸದರಿ ಕಾಮಗಾರಿಯು ರೂ. ೨.೦೦ ಕೋಟಿ ಹಾಗೂ ಅದಕ್ಕಿಂತ ಕಡಿಮೆ ಇದ್ದು, ಅತಿ ತುರ್ತಾಗಿ ನಿರ್ವಹಿಸಬೇಕಾಗಿರುವುದರಿಂದ ಮೆ॥ ಕೆ.ಆರ್.ಐ.ಡಿ.ಎಲ್ ಸಂಸ್ಥೆಗೆ ವಹಿಸಲು ಅನುಮೋದನೆ ಕೋರಿ.

22/10/19

ಕಾರ್ಯಪಾಲಕ ಅಭಿಯಂತರರು
ಯಲಹಂಕ ವಿಭಾಗ

Executive Engineer
B.B.M.P Division
Yelahanka

ಮುಖ್ಯ ಅಭಿಯಂತರರು (ಯಿ.ವ)

(೦೧) ಕಂಡಿಕೆ (೨) ರಿಂದ (೪) ರವರೆಗೆ ತಮ್ಮ ಅವಗಾಹನೆಗೆ ತರುತ್ತಾ ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹೊಸದಾಗಿ ಸೇರ್ಪಡೆಗೊಂಡ 110 ಹಳ್ಳಿಗಳ ಪ್ರದೇಶಗಳನ್ನು ಅಭಿವೃದ್ಧಿ ಪಡಿಸಲು ಹಾಗೂ ವಾರ್ಡ್‌ಗಳ ವ್ಯಾಪ್ತಿಯಲ್ಲಿರುವ ಶೇಕಡ ೫೦% ಕ್ಕಿಂತ ಹೆಚ್ಚಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗದವರು ವಾಸ ಮಾಡುವ ಸ್ಥಳಗಳನ್ನು ಅಭಿವೃದ್ಧಿ ಪಡಿಸುವ ಸಲುವಾಗಿ ಹಾಗೂ ವಾರ್ಡಗಳ ವ್ಯಾಪ್ತಿಯಲ್ಲಿನ ರಸ್ತೆಗಳಲ್ಲಿ ಕಾವೇರಿ ಮತ್ತು ನೀರು ಸರಬರಾಜು ಕೊಳವೆಸಾಲುಗಳನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ವತಿಯಿಂದ ಆಳವಡಿಸುತ್ತಿದ್ದು, ಈ ರಸ್ತೆಗಳು ತುಂಬಾ ಹದಗೆಟ್ಟಿರುತ್ತವೆ. ಆದುದರಿಂದ ಸದರಿ ಕಾಮಗಾರಿಗಳು ಅತಿ ತುರ್ತು ಎಂದು ಪರಿಗಣಿಸಿ ಕೈಗೊಳ್ಳಲಾಗಿದ್ದು, ಹಾಗೂ ಸರ್ಕಾರದ ಆದೇಶದ ಸಂಖ್ಯೆ ನಅಇ/೨೬೦/ಎಂ.ಎನ್.ವೈ/೨೦೧೯ ಬೆಂಗಳೂರು ದಿನಾಂಕ:೧೫-೧೦-೨೦೧೯ರ ಆದೇಶದಲ್ಲಿಂ ಮೆ॥ ಕೆ.ಆರ್.ಐ.ಡಿ.ಎಲ್ ಸಂಸ್ಥೆ ಮುಖಾಂತರ ನಿರ್ವಹಿಸಲು ಅನುಮೋದನೆ ನೀಡಿರುತ್ತಾರೆ. ಈ ಎಲ್ಲಾ ಅಂಶಗಳ ಹಿನ್ನಲೆಯಲ್ಲಿ ಈ ಕಾಮಗಾರಿಯನ್ನು ತುರ್ತು ಕಾಮಗಾರಿಯೆಂದು ಪರಿಗಣಿಸಿ ಸದರಿ ಕಾಮಗಾರಿಗೆ ಆಡಳಿತಾತ್ಮಕ ಮಂಜೂರಾತಿ ನೀಡಲು ಹಾಗೂ ಮೆ॥ ಕೆ.ಆರ್.ಐ.ಡಿ.ಎಲ್ ಸಂಸ್ಥೆ ಮುಖಾಂತರ ಕಾಮಗಾರಿಯನ್ನು ನಿರ್ವಹಿಸಲು ಮಾನ್ಯ ಆಯುಕ್ತರ ಅನುಮೋದನೆ ಕೋರಿ ಕಡತವನ್ನು ಮಂಡಿಸಿದೆ.

22/10/19

ಮುಖ್ಯ ಅಭಿಯಂತರರು
ಯಲಹಂಕ ವಿಶೇಷ ವಲಯ
ಯಲಹಂಕ ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

(೧) ವಲಯ ಶಿಷ್ಯೋಕರಿ:

ಕಡತದ ಸಂಖ್ಯೆ .....

ಪಂಕ್ತಿಯ ಸಂಖ್ಯೆ	ಟಿಪ್ಪಣಿಗಳು ಮತ್ತು ಆಜ್ಞೆಗಳು

Para 9/x for approval.

24.x

Special Commissioner (Project)
Bruhat Bangalore Mahanagara Palike

(11) Hon. Comm. 9/13 ಕಂಡಿಕೆ 9ರಲ್ಲಿ ತಿಳಿಸಿರುವಂತೆ ಸೂಕ್ತ ಅನುಮತಿಯನ್ನು ನೀಡಲು ಕೋರಿದೆ.

24/10/2019
Commissioner
Bruhat Bengaluru Mahanagara Palike

ಬಿ.ಬಿ.ಎಂ.ಪಿ. ಆಯುಕ್ತರ ಆಪ್ತ ಕಾರ್ಯಾಲಯ
ಸಂಖ್ಯೆ ಪಿ.ಎಸ್.ಆರ್. (ಗ) 4034
ದಿನಾಂಕ 24.10.19

(12) 2018-19ನೇ ಸಾಲಿನ "ಮಾನ್ಯ ಮುಖ್ಯ ಮಂತ್ರಿಗಳ ನವ ನಗರೋತ್ಥಾನ" ಯೋಜನೆಯ ಅನುಬಂಧ-2ರಲ್ಲಿ ಮಂಜೂರಾಗಿರುವ ಕಾಮಗಾರಿಯನ್ನು 2018-19ನೇ ಸಾಲಿನ ಲೋಕೋಪಯೋಗಿ ಇಲಾಖೆ ದರಪಟ್ಟಿಯನ್ವಯ ರೂ.95.00ಲಕ್ಷಗಳಿಗೆ ಈಗಾಗಲೇ ಕಾಮಗಾರಿ ಸಂಕೇತ ದೊರೆತ್ತಿದ್ದು ಅದರಂತೆ ಸರ್ಕಾರದ ಆದೇಶ ಸಂಖ್ಯೆ:ನಅಇ 250 ಎಂಎನ್‌ಪೈ 2019, ಬೆಂಗಳೂರು ದಿನಾಂಕ:15-10-2019ರಲ್ಲಿ ಅನುಮೋದಿಸಲಾಗಿರುವ ರೂ.2.00 ಕೋಟಿಗಳಿಗಿಂತ ಕಡಿಮೆ ಮೊತ್ತದ ಮತ್ತು ತುರ್ತು ಕಾಮಗಾರಿಗಳೆಂದು ಬಿಬಿಎಂಪಿಯಿಂದ ನಿಯಮಾನುಸಾರ ನಿರ್ಧರಿಸಿ ಮೆ: ಕೆ.ಆರ್.ಐ.ಡಿ.ಎಲ್ ಸಂಸ್ಥೆಗೆ ವಹಿಸುವ ಕಾಮಗಾರಿಗಳಿಗೆ ಸೀಮಿತವಾಗಿ ಕಾಮಗಾರಿಗಳ ಅಂದಾಜು ಪಟ್ಟಿಗಳಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡುವ ಅಧಿಕಾರವನ್ನು ಬಿ.ಬಿ.ಎಂ.ಪಿ ಮಾನ್ಯ ಆಯುಕ್ತರಿಗೆ ಪ್ರತ್ಯಾಯೋಜಿಸಿ ಆದೇಶಿಸಿದ್ದು, ಅದರಂತೆ ಆಡಳಿತಾತ್ಮಕ ಅನುಮೋದನೆ ನೀಡುವ ಅಧಿಕಾರವು ಮಾನ್ಯ ಆಯುಕ್ತರವರಿಗೆ ಇರುವುದರಿಂದ ಕಡತವನ್ನು ಮಾನ್ಯ ಆಯುಕ್ತರಿಗೆ ಸಲ್ಲಿಸಲಾಗಿದ್ದು ಕಂಡಿಕೆ(ಬ)ರಲ್ಲಿ ಮಾನ್ಯ ಆಯುಕ್ತರು ಆಡಳಿತಾತ್ಮಕ ಅನುಮೋದನೆ ಹಾಗೂ ಮೆ:ಕೆ.ಆರ್.ಐ.ಡಿ.ಎಲ್ ಸಂಸ್ಥೆ ಮುಖಾಂತರ ಕಾಮಗಾರಿಯನ್ನು ಕೈಗೊಳ್ಳಲು ಆದೇಶಿಸಿರುತ್ತಾರೆ. ಅದರಂತೆ ಸದರಿ ಕಾಮಗಾರಿಗೆ ಆಡಳಿತಾತ್ಮಕ ಟಿಪ್ಪಣಿ ತಯಾರಿಸಿ ಸಹಿ ಮಾಡಿದ್ದು, ತಾಂತ್ರಿಕ ಮಂಜೂರಾತಿ ಮತ್ತು ಡಿ.ಟಿ.ಎಸ್. ಅನುಮೋದನೆ ನೀಡಲು ಕೋರಿ ಕಡತವನ್ನು ತಮ್ಮ ಮುಂದಿನ ಆದೇಶಕ್ಕಾಗಿ ಸಲ್ಲಿಸಿದೆ.

ಕಾ.ಪ್ರ.ಅಭಿಯಂತರರು 25/10/19
Executive Engineer
B.B.M.P Division
Yelahanka

(13) ಮುಖ್ಯ ಅಭಿಯಂತರರು (ಯಿ.ವ)

TA 29/10/19

06	1	Yelahanka Burial ground development of kempegowda ward no -01 of yelahanka Sub division	10.00	25000.00	ST	40065